ಊ) ಬಾಕಿ ಇರುವ ಗ್ರಂಥಾಲಯ ಕರದ ವಿವರ

ಸ್ಥಳೀಯ ಸಂಸ್ಥೆ ಹೆಸರು	ಬಾಕಿ ಇರುವ ಗ್ರಂಥಾಲಯ ಸೆಸ್	ಸ್ಥಳೀಯ ಲೆಕ್ಕ ಪರಿಶೋಧನಾ ವರ್ತುಲರವರ ಮಾಹಿತಿಯಂತೆ ಮಾರ್ಚ–2014 ರ ಅಂತ್ಯಕ್ಕೆ ಇದ್ದಂತೆ
ಚಿಕ್ಕಬಳ್ಳಾಪುರ ತಾಲ್ಲೂಕು	12,34,006.00	
ಚಿಂತಾಮಣಿ ತಾಲ್ಲೂಕು	37,54,111.00	
ಶಿಡ್ಲಘಟ್ಟ ತಾಲ್ಲೂಕು	7,14,194.00	
ಗೌರಿಬಿದನೂರು ತಾಲ್ಲೂಕು	5,59,873.00	
ಬಾಗೇಪಲ್ಲಿ ತಾಲ್ಲೂಕು	2,36,388.00	
ಗುಡಿಬಂಡೆ ತಾಲ್ಲೂಕು	5,41,718.00	

ಋ) 2015–16ನೇ ಸಾಲಿನ ಆರ್ಥಿಕ ವರ್ಷದ ಅಂತ್ಯಕ್ಕೆ ವಸೂಲಿ ಮಾಡಲು ಕ್ರಮಕೈಗೊಳ್ಳಲಾಗುವುದು.

ಮಲಘಟ್ಟ ಕೆರೆಯನ್ನು ಪ್ರವಾಸದ ತಾಣವನ್ನಾಗಿ ಮಾಡುವುದು

1464(900); ಶ್ರೀ ಕೃಷ್ಣಪ್ಪ ಎಂ.ಟಿ. (ತುರುವೇಕೆರೆ)

ಅ) ತುಮಕೂರು ಜಿಲ್ಲೆ ತುರುವೇಕೆರೆ ತಾಲ್ಲೂಕಿನಲ್ಲಿ ಯಾವ ಸ್ಥಳಗಳನ್ನು ಪ್ರವಾಸಿ ತಾಣವನ್ನಾಗಿ ಗುರುತಿಸಲಾಗಿದೆ;

ಆ) ತುರುವೇಕೆರೆ ಪಟ್ಟಣ ವ್ಯಾಪ್ತಿಯಲ್ಲಿ ಬರುವ ಮಲಘಟ್ಟ ಕೆರೆಯನ್ನು ಪ್ರವಾಸಿ ತಾಣವಾಗಿ ಆಯ್ಕೆ ಮಾಡಲು ಕಳೆದ ನಾಲ್ಕು ವರ್ಷದಿಂದ ಕೋರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈಗಾಗಲೇ ಇಲಾಖೆ ವತಿಯಿಂದ ಸ್ಥಳ ಗುರುತಿಸಿ ಅಂದಾಜು ಪಟ್ಟಿಯನ್ನು ಅನುಮೋದನೆಗಾಗಿ ಸಲ್ಲಿಸಿದ್ದು, ಸರ್ಕಾರವು ಅನುಮೋದನೆ ನೀಡಲು ಕ್ರಮ ಕೈಗೊಂಡಿದೆಯೇ;

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು)

ಅ) ತುಮಕೂರು ಜಿಲ್ಲೆ ತುರುವೇಕೆರೆ ತಾಲ್ಲೂಕಿನಲ್ಲಿ ತುರುವೇಕೆರೆಯನ್ನು ಪ್ರವಾಸಿ ತಾಣವಾಗಿ ಗುರುತಿಸಲಾಗಿದೆ.

ಆ) ಬಂದಿದೆ.

ಇ) ಪ್ರವಾಸೋದ್ಯಮ ಇಲಾಖೆಯಿಂದ ಈ ಯೋಜನೆಗೆ ಸಂಬಂಧಿಸಿದಂತೆ ಅಂದಾಜು ಪಟ್ಟಿಯನ್ನು ತಯಾರಿಸಿರುವುದಿಲ್ಲ.

ಆದರೆ, ಈ ಕೆರೆಯ ವಿಸ್ತೀರ್ಣ ಸುಮಾರು 650 ಹೆಕ್ಟೇರ್ ಆಗಿದ್ದು, ಕೆರೆಯ ನೀರನ್ನು ಸುತ್ತಮುತ್ತಲಿನ ಗ್ರಾಮಗಳು ಕುಡಿಯುವ ನೀರಿಗಾಗಿ ಹಾಗೂ ವ್ಯವಸಾಯಕ್ಕಾಗಿ ಬಳಸುತ್ತಿರುವುದರಿಂದ ಹಾಗೂ ಈ ಕೆರೆಯು ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಗೆ ಬರುವುದರಿಂದ ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸಲು ಬರುವುದಿಲ್ಲ.

ಬಯಲು ರಂಗ ಮಂದಿರ ಮಂಜೂರು

1465(901); ಶ್ರೀ ಕೃಷ್ಣಪ್ಪ ಎಂ.ಟಿ. (ತುರುವೇಕೆರೆ)

ಅ) ತುರುವೇಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ದಂಡಿನಶಿವರ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳ ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ಬಯಲುರಂಗಮಂದಿರ ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಹೊಸ ಬಯಲುರಂಗ ಮಂದಿರ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮವೇನು; (ವಿವರವಾದ ಮಾಹಿತಿ ನೀಡುವುದು)

ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಲಕಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಹೌದು.